ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

***ಖಂಡ 2 ರಿಂದ 60 ರವರೆಗೆ***

ಅಧ್ಯಕ್ಷರು : ಖಂಡ 2 ರಿಂದ 60 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(2 ರಿಂದ 60 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

***ಖಂಡ 1 ಇತ್ಯಾದಿ***

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

1.00 ಪಿ.ಎಂ

**ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ, 1999**

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್, ವಾರ್ತಾ ಮತ್ತು ಪ್ರಚಾರ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ

ಕರ್ನಾಟಕ ಪಂಚಾಯತ್‌ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

*ಪ್ರಸ್ತಾವವನ್ನು ಮಂಡಿಸಲಾಯಿತು*

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಪಂಚಾಯತ್‌ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು".

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

***ಖಂಡ 2ರಿಂದ 3ರವರೆಗೆ***

ಅಧ್ಯಕ್ಷರು : "ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

(ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

***ಖಂಡ 1 ಇತ್ಯಾದಿ***

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

("ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು.)

*ಪ್ರಸ್ತಾವದ ಅಂಗೀಕಾರ*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್, ವಾರ್ತಾ ಮತ್ತು ಪ್ರಚಾರ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು ; ಪ್ರಸ್ತಾವ ಏನೆಂದರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಪಂಚಾಯತ್‌ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು*

## ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 1999

*ಪರ್ಯಾಲೋಚನಾ ಪ್ರಸ್ತಾವ*

ಶ್ರೀ ಡಿ. ಮಂಜುನಾಥ (ಅರಣ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

*ಪ್ರಸ್ತಾವವನ್ನು ಮಂಡಿಸಲಾಯಿತು*

ಅಧ್ಯಕ್ಷರು ; ಪ್ರಸ್ತಾವ ಏನೆಂದರೆ,

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು".

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

***ಖಂಡ 2ರಿಂದ 3ರವರೆಗೆ***

ಅಧ್ಯಕ್ಷರು : "ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*

(ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

***ಖಂಡ 1 ಇತ್ಯಾದಿ***

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

*ಪ್ರಸ್ತಾವ ಅಂಗೀಕರಿಸಲ್ಪಟ್ಟಿತು*